# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1329
ಸದಸ್ಯರ ಹೆಸರು : ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 18-03-2020
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| (ಅ) | ಚಿಕ್ಕಮಗಳೂರು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ 'ಕಾಫಿ ತೋಟಗಳು' ನಾಶವಾಗಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಚಿಕ್ಕಮಗಳೂರು ಜಿಲ್ಲೆಯಲ್ಲಿ 2019ರ ಆಗಸ್ಟ್ ತಿಂಗಳ ತೀವ್ರ ಮಳೆ ಹಾಗೂ ಭೂ ಕುಸಿತದಿಂದ 17,981.00 ಹೆಕ್ಟೇರ್ ಕಾಫಿ ಬೆಳೆ ಹಾನಿಯಾಗಿದ್ದು, ಜಂಟಿ ಸಮೀಕ್ಷೆ ವರದಿ ಪಡೆದು ಪರಿಹಾರ ತಂತ್ರಾಂಶದಲ್ಲಿ ವಿವರ ದಾಖಲಿಸಿ, ಒಟ್ಟು 12,895 ರೈತರಿಗೆ ರೂ.40,78,00,000/-ಗಳ ಇನ್‌ಪುಟ್ ಸಬ್ಸಿಡಿ ಮೊತ್ತವನ್ನು ಆಯಾ ರೈತರ ಖಾತೆಗೆ ಜಮಾ ಮಾಡಲಾಗಿದೆ. |
| (ಇ) | ಸಂಕಷ್ಟಕ್ಕೀಡಾದ ರೈತರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಅವರುಗಳ ಸಂಪೂರ್ಣ ಮಾಹಿತಿ ಹಾಗೂ ಪರಿಹಾರದ ಮೊತ್ತದ ವಿವರ ನೀಡುವುದು; | ಜಿಲ್ಲೆಯಲ್ಲಿ ಕಾಫಿ ಹಾಗೂ ಇತರೆ ಬೆಳೆ ಹಾನಿ ಸೇರಿದಂತೆ ಒಟ್ಟು 26,934 ರೈತರಿಗೆ ರೂ.61,70,46,405/-ಗಳ ಮೊತ್ತದ ಪರಿಹಾರವನ್ನು ನೀಡಲಾಗಿದೆ.<br>(ಫಲಾನುಭವಿಗಳ ಪೂರ್ಣ ಮಾಹಿತಿಯು http://parihara.karnataka.gov.in/Pariharahome ವೆಬ್‌ಸೈಟ್ ನಲ್ಲಿ ಲಭ್ಯವಿದೆ) |
| (ಈ) | ಪರಿಹಾರ ನೀಡದಿರುವ ರೈತರಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ನೀಡಲಾಗುವುದು (ವಿವರ ನೀಡುವುದು) | ಅರ್ಹ ಎಲ್ಲಾ ರೈತರಿಗೆ ಇನ್‌ಪುಟ್ ಸಬ್ಸಿಡಿ ನೀಡಲಾಗಿದೆ. |

<table>
<tr>
<td>(ಉ) ಯಾವ ಯಾವ ಮಾನದಂಡಗಳನ್ನು ಆಧರಿಸಿ ಪರಿಹಾರ ನೀಡಲಾಗಿದೆ? (ವಿವರ ನೀಡುವುದು)</td>
<td>ಪ್ರವಾಹದಿಂದ ಬೆಳೆಹಾನಿಯಾದ ರೈತರ ಬ್ಯಾಂಕ್ ಖಾತೆಗೆ ಪರಿಹಾರ ತಂತ್ರಾಂಶದ ಮೂಲಕ ನೇರವಾಗಿ ಇನ್‌ಪುಟ್ ಸಬ್ಸಿಡಿ ಮೊತ್ತವನ್ನು ಜಮಾ ಮಾಡಲಾಗಿದೆ.<br><br>ಎಸ್.ಡಿ.ಆರ್.ಎಫ್/ಎನ್.ಡಿ.ಆರ್.ಎಫ್ ಮಾರ್ಗಸೂಚಿಯಂತೆ ಬೆಳೆಹಾನಿಯಾದ ಎಲ್ಲಾ ರೈತರಿಗೆ ಪರಿಹಾರ ನೀಡಲಾಗಿದೆ.<br><br>2019ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಎಸ್.ಡಿ.ಆರ್.ಎಫ್/ಎನ್.ಡಿ.ಆರ್.ಎಫ್ ಮಾರ್ಗಸೂಚಿಗಳಲ್ಲಿ ನಿಗದಿಪಡಿಸಿರುವ ದರಕ್ಕಿಂತ ಹೆಚ್ಚುವರಿಯಾಗಿ ಪ್ರತಿ ಹೆಕ್ಟೇರ್‌ಗೆ ರೂ.10,000/- ಹೆಚ್ಚುವರಿ ದರದಲ್ಲಿ ಕೆಳಕಂಡಂತೆ ಇನ್‌ಪುಟ್ ಸಬ್ಸಿಡಿಯನ್ನು ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗಿದೆ. ಹೆಚ್ಚುವರಿ ದರದ ಮೊತ್ತವನ್ನು ರಾಜ್ಯ ವಲಯದಡಿ ಭರಿಸಲಾಗುತ್ತದೆ.
<table>
<tr><th>ಬೆಳೆ ವಿಧ</th><th>ಮಾರ್ಗಸೂಚಿ</th><th>ಪರಿಷ್ಕೃತ ದರ</th></tr>
<tr><td>ಮಳೆಯಾಶ್ರಿತ</td><td>ರೂ.6800/-</td><td>ರೂ.16800/</td></tr>
<tr><td>ನೀರಾವರಿ</td><td>ರೂ.13500/-</td><td>ರೂ.23500/</td></tr>
<tr><td>ಬಹುವಾರ್ಷಿಕ</td><td>ರೂ.18000/-</td><td>ರೂ.28000/</td></tr>
</table>
</td>
</tr>
</table>

ಕಂಇ 152 ಟಿಎನ್‌ಆರ್ 2020

(ಆರ್. ಅಶೋಕ)
ಕಂದಾಯ ಸಚಿವರು